# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 25-03-2021 ಪ್ರಶ್ನೆ ಸಂಖ್ಯೆ : 1812 (2123)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 25-03-2021

ಉತ್ತರಿಸುವ ಸಚಿವರು: ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು

ವಿಷಯ : ಔರಾದ್ಕರ್ ಸಮಿತಿಯ ವರದಿ ಬಗ್ಗೆ

(ಅ) 2019 ರಲ್ಲಿ ಪೊಲೀಸ್ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳ ವೇತನ ಮತ್ತು ಭತ್ಯೆಗಳನ್ನು ಪರಿಷ್ಕರಿಸುವ ಸಂಬಂಧ ರಚಿಸಲಾದ ಔರಾದ್ಕರ್ ಸಮಿತಿಯ ವರದಿಯನ್ನು ಜಾರಿಗೊಳಿಸಲಾಗಿದೆಯೇ; ಈ ವರದಿಯಿಂದ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಆರ್ಥಿಕವಾಗಿ ಅನುಕೂಲವಾಗಿದೆಯೇ; ಅನುಕೂಲವಾಗಿದ್ದಲ್ಲಿ, ಯಾವ ಪ್ರಮಾಣದಲ್ಲಿ ಅನುಕೂಲವಾಗಿದೆ; (ವಿವರ ನೀಡುವುದು)

(ಆ) ಈ ವರದಿಯಿಂದ 20 ರಿಂದ 25 ವರ್ಷ ಸೇವೆ ಸಲ್ಲಿಸಿರುವವರಿಗೆ ಮತ್ತು 5 ರಿಂದ 10 ವರ್ಷ ಸೇವೆ ಸಲ್ಲಿಸಿರುವವರಿಗೆ ಆರ್ಥಿಕವಾಗಿ ಆಗಿರುವ ಅನುಕೂಲಗಳೇನು ;

(ಇ) ಈ ವರದಿಯಿಂದ 10 ವರ್ಷಗಳಿಗೂ ಮೇಲ್ಪಟ್ಟು ಸೇವೆ ಸಲ್ಲಿಸಿರುವ ಸಿಬ್ಬಂದಿಗಳಿಗೆ ಅನುಕೂಲವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಹೆಚ್ಚು ವರ್ಷ ಸೇವೆ ಸಲ್ಲಿಸಿರುವವರಿಗೆ ಆರ್ಥಿಕವಾಗಿ ಹೆಚ್ಚು ಅನುಕೂಲವಾಗುವಂತೆ ಪರಿಷ್ಕøತ ವರದಿಯನ್ನು ಪಡೆಯಲಾಗುವುದೇ ; (ವಿವರ ನೀಡುವುದು)

(ಈ) ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳು ಹಾಗೂ ಅವರ ಕುಟುಂಬದವರಿಗೆ ಅನುಕೂಲವಾಗಲೆಂದು ಜಾರಿಗೆ ತಂದಿರುವ ಆರೋಗ್ಯ ಭಾಗ್ಯಯೋಜನೆಯ ಉದ್ದೇಶಗಳೇನು; ಈ ಯೋಜನೆಯಡಿ ಚಿಕಿತ್ಸೆ ಪಡೆಯುವವರಿಗೆ ಶೇ.100 ರಷ್ಟು ಸೇವೆಯನ್ನು ಉಚಿತವಾಗಿ ನೀಡಲಾಗುತ್ತಿದೆ ; (ವಿವರ ನೀಡುವುದು)

(ಉ) ಈ ಯೋಜನೆಯಡಿ ಚಿಕಿತ್ಸೆ ಪಡೆಯುವ ರೋಗಿಗಳಿಂದ ಹಣ ವಸೂಲಿ ಮಾಡುತ್ತಿದ್ದು, ಆಸ್ಪತ್ರೆಯವರು ಶೇ.100 ರಷ್ಟು ಸೇವೆಯನ್ನು ಉಚಿತವಾಗಿ ನೀಡುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಯೋಜನೆಗಾಗಿ ಅಧಿಕಾರಿ ಮತ್ತು ಸಿಬ್ಬಂದಿಗಳ ಸಂಬಳದಲ್ಲಿ ಮಾಹೆಯಾನ ರೂ.200/-ಗಳನ್ನು ಕಟಾವು ಮಾಡುವ ಔಚಿತ್ಯವೇನು ? (ವಿವರ ನೀಡುವುದು)